Akashvani : Bangalore
Regional Bulletin In Kannada
05.02.2026 / 18.40 hrs
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

***************

ಮುಖ್ಯಾಂಶಗಳು

೧. ಮಾಲೂರು ವಿಧಾನಸಭಾ ಕ್ಷೇತ್ರದ ಮರು ಮತ ಎಣಿಕೆ; ಹಾಲಿ ಶಾಸಕ ನಂಜೇಗೌಡ ಗೆಲುವು - ಸುಪ್ರೀಂಕೋರ್ಟ್ ತೀರ್ಪು

೨. ಮಂಡ್ಯ - ಮೈಸೂರು ರೈಲು ಮಾರ್ಗದ ವಿವಿಧ ಬೇಡಿಕೆ ಈಡೇರಿಸುವಂತೆ ರೈಲ್ವೆ ಸಚಿವರಿಗೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಮನವಿ

೩. ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬಜೆಟ್ ಪೂರ್ವ ಸಮಾಲೋಚನೆ

೪. ಅಕ್ರಮ ಹಣ ವರ್ಗಾವಣೆ ಪ್ರಕರಣ; ಕಾಂಗ್ರೆಸ್ ಶಾಸಕ ಸತೀಶ್ ಸೈಲ್‌ಗೆ ವೈದ್ಯಕೀಯ ಜಾಮೀನು ನೀಡಿದ ಹೈಕೋರ್ಟ್

೫. ಡಬ್ಲ್ಯೂಪಿಎಲ್ ಕ್ರಿಕೆಟ್; ಫೈನಲ್‌ನಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು - ಡೆಲ್ಲಿ ಕ್ಯಾಪಿಟಲ್ಸ್ ಮುಖಾಮುಖಿ

***************

ಮಾಲೂರು ಕ್ಷೇತ್ರದ ಮರು ಮತ ಎಣಿಕೆ ನಂತರ ಕಾಂಗ್ರೆಸ್ ಶಾಸಕ ಕೆ.ವೈ.ನಂಜೇಗೌಡ ವಿಜೇತರಾಗಿದ್ದಾರೆ ಎಂದು ಸುಪ್ರೀಂಕೋರ್ಟ್ ತೀರ್ಪು ನೀಡಿದೆ.

ಸುಪ್ರೀಂಕೋರ್ಟ್ ಆದೇಶದಂತೆ ಕಳೆದ ನವೆಂಬರ್ ೧೧ ರಂದು ಮಾಲೂರು ಕ್ಷೇತ್ರದ ಮರು ಮತ ಎಣಿಕೆ ನಡೆದಿದ್ದು, ಮರು ಮತ ಎಣಿಕೆ ನಡೆದ ನಂತರ ಚುನಾವಣಾಧಿಕಾರಿಗಳು ಯಾವುದೇ ಫಲಿತಾಂಶವನ್ನು ಘೋಷಿಸದೇ ಮುಚ್ಚಿದ ಲಕೋಟೆಯಲ್ಲಿ ನ್ಯಾಯಾಲಯಕ್ಕೆ ಸಲ್ಲಿಸಿದ್ದರು.

೨೦೨೩ರಲ್ಲಿ ನಡೆದ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಕೆ.ಎಸ್. ಮಂಜುನಾಥಗೌಡ ೫೦ ಸಾವಿರದ ೭೦೭ ಮತಗಳನ್ನು ಪಡೆದಿದ್ದು, ಕಾಂಗ್ರೆಸ್‌ನ ಹಾಲಿ ಶಾಸಕ ಕೆ.ವೈ.ನಂಜೇಗೌಡ ೫೦ ಸಾವಿರದ ೯೫೫ ಮತಗಳನ್ನು ಪಡೆದು ೨೪೮ ಮತಗಳ ಅಂತರದಿಂದ ಜಯಗಳಿಸಿದ್ದರು.

ಮರು ಮತ ಎಣಿಕೆ ಮಾಡುವಂತೆ ಬಿಜೆಪಿ ಅಭ್ಯರ್ಥಿ ಕೆ.ಎಸ್. ಮಂಜುನಾಥಗೌಡ ಹೈಕೋರ್ಟ್ ಮೆಟ್ಟಿಲೇರಿದ್ದರು. ಹೈಕೋರ್ಟ್ ನ್ಯಾಯಪೀಠವು ವಿಚಾರಣೆ ನಡೆಸಿ ಕೆ.ವೈ.ನಂಜೇಗೌಡ ಅವರ ಶಾಸಕ ಸ್ಥಾನವನ್ನು ಅಸಿಂಧುಗೊಳಿಸಿ ತಡೆ ನೀಡಿತ್ತು ಹಾಗೂ ಮರು ಮತ ಎಣಿಕೆ ನಡೆಸುವಂತೆ ಆದೇಶಿಸಿತ್ತು.

ಈ ಸಂಬಂಧ ಶಾಸಕ ಕೆ.ವೈ.ನಂಜೇಗೌಡ ಸುಪ್ರೀಂಕೋರ್ಟ್ ಮೊರೆ ಹೋಗಿದ್ದರು.

***************

ಮಂಡ್ಯ - ಮೈಸೂರು ರೈಲು ಮಾರ್ಗದ ವಿವಿಧ ಬೇಡಿಕೆಗಳ ಕುರಿತಂತೆ ಕೇಂದ್ರ ಕೈಗಾರಿಕಾ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ. ಕುಮಾರಸ್ವಾಮಿ ಇಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರೊಂದಿಗೆ ಮಾತುಕತೆ ನಡೆಸಿದ್ದಾರೆ.

ಬೆಂಗಳೂರು ನಗರದಿಂದ ಮೈಸೂರು ನಡುವೆ ಬಹಳ ದಿನಗಳಿಂದ ನನೆಗುದಿಗೆ ಬಿದ್ದಿರುವ ಹಲವು ರೈಲ್ವೆ ಬೇಡಿಕೆಗಳ ಬಗ್ಗೆ ಪ್ರಸ್ತಾಪಿಸಿ ಮದ್ದೂರು ರೈಲು ನಿಲ್ದಾಣವನ್ನು ಮೇಲ್ದರ್ಜೆಗೇರಿಸಲು ಮನವಿ ಸಲ್ಲಿಸಿದ್ದಾರೆ.

ಮಂಡ್ಯ, ಮೇಲುಕೋಟೆ ರಸ್ತೆಯ ವಿ.ಸಿ. ಫಾರಂ ಗೇಟ್‌ನಲ್ಲಿ ರೈಲ್ವೆ ಮೇಲ್ಸೇತುವೆ ನಿರ್ಮಾಣಕ್ಕೆ ಪ್ರಸ್ತಾವನೆ ಸಲ್ಲಿಸಿದ್ದಾರೆ.

ದೊಡ್ಡ ಬ್ಯಾಡರಹಳ್ಳಿಯಲ್ಲಿ ರೈಲ್ವೆ ಮೇಲ್ಸೇತುವೆ, ಪಾಂಡಪುರದಲ್ಲಿ ಗೂಡ್ಸ್‌ಯಾರ್ಡ್ ಸ್ಥಾಪನೆ, ಮದ್ದೂರು ತಾಲೂಕಿನ ಹನಕೆರೆ ಗ್ರಾಮದ ಬಳಿ ಇರುವ ಲೆವೆಲ್ ಕ್ರಾಸಿಂಗ್ ಅನ್ನು ಮೇಲ್ದರ್ಜೆಗೇರಿಸಬೇಕೆಂದು ಸಚಿವರು ಕೋರಿದ್ದಾರೆ.

ಚನ್ನಪಟ್ಟಣದಲ್ಲಿ ಬೆಂಗಳೂರು ಮತ್ತು ಮೈಸೂರು ನಡುವೆ ಸಂಚರಿಸುವ ಎಕ್ಸ್‌ಪ್ರೆಸ್ ರೈಲುಗಳನ್ನು ನಿಲುಗಡೆ ಮಾಡುವಂತೆ ಅಶ್ವಿನಿ ವೈಷ್ಣವ್ ಅವರಿಗೆ ಮನವರಿಕೆ ಮಾಡಿದ್ದಾರೆ.

***************

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ವಿವಿಧ ಇಲಾಖೆ ಅಧಿಕಾರಿಗಳೊಂದಿಗೆ ಬಜೆಟ್ ಪೂರ್ವಬಾವಿ ಸಭೆ ನಡೆಸಿದರು.

ಬೆಳಗ್ಗೆಯಿಂದ ಅರಣ್ಯ, ಪರಿಸರ ಇಲಾಖೆ, ಕಾನೂನು ಪ್ರವಾಸೋದ್ಯಮ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಮಧ್ಯಾಹ್ನದ ಬಳಿಕ ತೋಟಗಾರಿಕಾ ಇಲಾಖೆ, ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಹಾಗೂ ಅಧಿಕಾರಿಗಳೊಂದಿಗೆ ಬಜೆಟ್ ಪೂರ್ವ ಸಮಾಲೋಚನೆ ನಡೆಸಿದರು.

ಬಳಿಕ ಅವರು, ಕಾರ್ಮಿಕ ಇಲಾಖೆ ಒಳಾಡಳಿತ ಇಲಾಖೆ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದರು.

***************

ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಜೈಲಿನಲ್ಲಿರುವ ಕಾಂಗ್ರೆಸ್ ಶಾಸಕ ಸತೀಶ್ ಸೈಲ್‌ಗೆ ಉಚ್ಛ ನ್ಯಾಯಾಲಯ ವೈದ್ಯಕೀಯ ಜಾಮೀನು ನೀಡಿದೆ.

ಯಕೃತ್ ಕಸಿ ಮಾಡಿಕೊಳ್ಳಲು ನ್ಯಾಯಾಲಯ ಜಾಮೀನು ನೀಡಿದ್ದು, ಪ್ರತಿ ಎರಡು ವಾರಗಳಿಗೊಮ್ಮೆ ವರದಿ ಸಲ್ಲಿಸುವಂತೆ ಸೂಚಿಸಿದೆ. ೮ ವಾರಗಳಿಗೊಮ್ಮೆ ನ್ಯಾಯಾಲಯದ ಮುಂದೆ ಆರೋಗ್ಯ ಪ್ರಗತಿ ವರದಿ ಸಲ್ಲಿಸುವಂತೆ ತಿಳಿಸಿದೆ.

ಸಾಕ್ಷಿಗಳ ಮೇಲೆ ಯಾವುದೇ ರೀತಿಯ ಪ್ರಭಾವ ಬೀರಬಾರದು, ವಿಚಾರಣೆಯ ಪ್ರಕ್ರಿಯೆಗಳಿಗೆ ಅಡ್ಡಿಪಡಿಸಬಾರದು ಎಂದು ಹೇಳಿದೆ.

ವೈಯಕ್ತಿಕ ಶ್ಯೂರಿಟಿ ಜೊತೆಗೆ ೫ ಲಕ್ಷ ರೂಪಾಯಿಗಳ ಶ್ಯೂರಿಟಿ ಬಾಂಡ್ ಸಲ್ಲಿಸುವಂತೆ ಶಾಸಕರಿಗೆ ಸೂಚಿಸಿದೆ.

***************

ಮಾದಕ ವ್ಯಸನ ಮುಕ್ತ ಕರ್ನಾಟಕ ನಿರ್ಮಾಣಕ್ಕೆ ಸರ್ಕಾರ ನಿರ್ಧರಿಸಿದ್ದು, ಮಾದಕ ವ್ಯಸನದಿಂದಾಗುವ ದುಷ್ಪರಿಣಾಮ, ಹಾನಿ ಕುರಿತು ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವ ಕಾರ್ಯವಾಗಬೇಕು ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸಾರಿಗೆ ಇಲಾಖೆ ಹಾಗೂ ಪೊಲೀಸ್ ಇಲಾಖೆ ವತಿಯಿಂದ ನಡೆದ ಇ-ಡಿಎಆರ್ ಅನುಷ್ಠಾನ ಹಾಗೂ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆ - ೨೦೨೬ ಸಮಾರೋಪ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಅಪಘಾತ ತಡೆಗಟ್ಟಲು ನಗರದ ೫೦೦ ಜಂಕ್ಷನ್‌ಗಳಲ್ಲಿ ೧೦ ಸಾವಿರಕ್ಕೂ ಹೆಚ್ಚು ಕೃತಕ ಬುದ್ಧಿಮತ್ತೆ ಕ್ಯಾಮರಾಗಳನ್ನು ಅಳವಡಿಸಿಕೊಳ್ಳಲಾಗಿದೆ ಎಂದು ಹೇಳಿದ್ದಾರೆ.

***************

ರಾಷ್ಟ್ರೀಯ ಹೆದ್ದಾರಿ ೪೪ರ ಹಳೆ ಚಂದಾಪುರ ಬಳಿ ತಾತ್ಕಾಲಿಕವಾಗಿ ಮಣ್ಣು ಕುಸಿತ ಸಂಭವಿಸಿದೆ ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ತಿಳಿಸಿದೆ.

ಇದು ಬೆಂಗಳೂರು-ಹೊಸೂರು ಕಾರಿಡಾರ್‌ನಲ್ಲಿ ಸಂಚಾರ ದಟ್ಟಣೆಗೆ ಕಾರಣವಾಗಿದೆ ಎಂದು ತಿಳಿಸಿದೆ.

ದೀರ್ಘಕಾಲೀನ ಸುರಕ್ಷತೆ ಮತ್ತು ಮೂಲಸೌಕರ್ಯ ಸುಧಾರಣೆಯ ಹಿತದೃಷ್ಟಿಯಿಂದ ಅಗತ್ಯ ಕಾಮಗಾರಿಗಳು ನಡೆಯುತ್ತಿರುವಾಗ ಉಂಟಾದ ಅನಾನುಕೂಲತೆಗೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ವಿಷಾದ ವ್ಯಕ್ತಪಡಿಸಿದೆ.

***************

ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರದ ಮುಖವಾಡವನ್ನು ಅಧಿವೇಶನದಲ್ಲಿ ಬಹಿರಂಗಪಡಿಸಲಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವ ಅವರು, ಸರ್ಕಾರದ ಖಜಾನೆ ಖಾಲಿಯಾಗಿದ್ದು, ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಜಾರಿಗೊಳಿಸಿರುವ ವಿಕಸಿತ ಭಾರತ ಜಿ ರಾಮ್ ಜಿ ಕಾಯ್ದೆ ವಿರುದ್ಧ ತಕರಾರು ತೆಗೆದಿದ್ದಾರೆ ಎಂದು ವ್ಯಂಗ್ಯವಾಡಿದ್ದಾರೆ.

ಅಬಕಾರಿ ಹಗರಣವನ್ನು ಜನತಾ ನ್ಯಾಯಾಲಯಕ್ಕೆ ಕೊಂಡೊಯ್ಯಲಾಗುವುದು. ಜೊತೆಗೆ ಕಾನೂನು ಹೋರಾಟ ನಡೆಸುವುದಾಗಿ ಸ್ಪಷ್ಟಪಡಿಸಿದ್ದಾರೆ.

***************

ನೇಪಾಳದಲ್ಲಿ ಕುಳಿತು ಭಾರತೀಯರನ್ನು ಗುರಿಯಾಗಿಸಿ ನೂರಾರು ಕೋಟಿ ರೂಪಾಯಿ ವಂಚನೆ ಮಾಡಿದ ೧೧ ಮಂದಿಯ ತಂಡವನ್ನು ಮಂಗಳೂರು ನಗರ ಸೆನ್ ಕ್ರೈಂ ಪೊಲೀಸ್ ಠಾಣೆಯ ಪೊಲೀಸರು ಬಂಧಿಸಿದ್ದಾರೆ.

ವಂಚಕರ ತಂಡದಲ್ಲಿ ೧೬ ಭಾರತೀಯರು ಹಾಗೂ ಚೈನಾದ ಈ ಪ್ರಕರಣದಲ್ಲಿ ಐವರು ಭಾರತೀಯ ಆರೋಪಿಗಳು ತಲೆಮರೆಸಿಕೊಂಡಿದ್ದು, ಪತ್ತೆ ಕಾರ್ಯ ಮುಂದುವರೆದಿದೆ ಎಂದು ಮಂಗಳೂರು ನಗರ ಪೊಲೀಸ್ ಆಯುಕ್ತ ಸುಧೀರ್ ಕುಮಾರ್ ರೆಡ್ಡಿ ತಿಳಿಸಿದ್ದಾರೆ.

***************

ಗದಗ ಜಿಲ್ಲೆಯ ಐತಿಹಾಸಿಕ ಪ್ರಸಿದ್ಧ ಲಕ್ಕುಂಡಿ ಗ್ರಾಮದಲ್ಲಿ ನಡೆಯುತ್ತಿರುವ ಉತ್ಖನನ ಕಾರ್ಯವನ್ನು ಇಂದು ಬಾಗಲಕೋಟೆ ಸಂಸದ ಪಿ.ಸಿ. ಗದ್ದಿಗೌಡರ್ ಭೇಟಿ ನೀಡಿ ಪರಿಶೀಲಿಸಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಲ್ಯಾಣ ಚಾಲುಕ್ಯರು ಮತ್ತು ವಿಜಯನಗರ ಅರಸರು ತಮ್ಮ ಆಳ್ವಿಕೆಯ ಸಂದರ್ಭದಲ್ಲಿ ಲಕ್ಕುಂಡಿ ಪರಿಸರದಲ್ಲಿ ನೂರಾರು ದೇವಾಲಯಗಳನ್ನು ಮತ್ತು ಕಲ್ಯಾಣಿಗಳನ್ನು ನಿರ್ಮಿಸಿರುವುದು ಇತಿಹಾಸಗಳಿಂದ ತಿಳಿದು ಬರುತ್ತದೆ. ಭೂಮಿಯಲ್ಲಿ ಹುದಗಿರುವ ವಿಶ್ವ ಪ್ರಸಿದ್ಧ ಸ್ಮಾರಕಗಳನ್ನು ಜಗತ್ತಿಗೆ ಪರಿಚಯಿಸುವ ಉದ್ದೇಶದಿಂದ ಉತ್ಖನನ ಕಾರ್ಯಕ್ಕೆ ಕೇಂದ್ರದ ಸಹಕಾರ ಕುರಿತಂತೆ ಸಂಪೂರ್ಣವಾಗಿ ಪ್ರಯತ್ನಿಸಲಾಗುವುದು ಎಂದು ಭರವಸೆ ನೀಡಿದ್ದಾರೆ.

***************

ಚಾಮರಾಜನಗರ ಜಿಲ್ಲಾಡಳಿತ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಂಗಳೂರಿನ ಜನರಲ್ ತಿಮ್ಮಯ್ಯ ರಾಷ್ಟ್ರೀಯ ಸಾಹಸ ಅಕಾಡೆಮಿ ಸಹಯೋಗದಲ್ಲಿ ಚಾಮರಾಜನಗರ ತಾಲೂಕಿನ ಸುವರ್ಣಾವತಿ ಜಲಾಶಯದಲ್ಲಿ ರೋಮಾಂಚಕ ಜಲಸಾಹಸ ಕ್ರೀಡೋತ್ಸವ ನಡೆಯಿತು.

ಎರಡು ದಿನಗಳ ಜಲಸಾಹಸಕ್ಕೆ ಚಾಮರಾಜನಗರ ಶಾಸಕ ಸಿ.ಪುಟ್ಟರಂಗಶೆಟ್ಟಿ, ಜಿಲ್ಲಾಧಿಕಾರಿ ಶ್ರೀರೂಪಾ ಚಾಲನೆ ನೀಡಿದರು. ಸ್ಪೀಡ್ ಬೋಟ್, ಬಿಗ್ ಬೋಟ್, ಬನಾನಾ ರೈಡ್, ಜೆಟ್ ಸ್ಕೀ,

ಕಯಾಕಿ ಸೇರಿದಂತೆ ವಿವಿಧ ಬೋಟ್ ಗಳಲ್ಲಿ ಶಾಲಾ-ಕಾಲೇಜು ವಿದ್ಯಾರ್ಥಿಗಳು, ಯುವಜನತೆ ಭಾಗಿಯಾಗಿದ್ದರು.

***************

ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಯಡಿ ದಾವಣಗೆರೆ ಜಿಲ್ಲೆಯಲ್ಲಿ ೫ ಮೆಕ್ಕೆಜೋಳ ಖರೀದಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ. ನೋಂದಣಿ ಮಾಡಿಸಿದ ೩ ಸಾವಿರದ ೪೧೨ ರೈತರು ೮೭ಸಾವಿರದ ೨೫೮ ಕ್ವಿಂಟಲ್ ಮೆಕ್ಕೆಜೋಳವನ್ನು ಜಿಲ್ಲೆಯ ಮಾರುಕಟ್ಟೆಗಳಲ್ಲಿ ಮಾರಾಟ ಮಾಡಿ ಪಿ.ಡಿ.ಪಿ.ಎಸ್. ಯೋಜನೆಯ ಲಾಭ ಪಡೆದಿದ್ದಾರೆ ಎಂದು ಜಿಲ್ಲಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ಮಾಹಿತಿ ನೀಡಿದ್ದಾರೆ.

ಜಿಲ್ಲೆಯಲ್ಲಿ ವಿವಿಧ ಕುಕ್ಕುಟ ಆಹಾರ ಉತ್ಪಾದಕ ಘಟಕಗಳಿಗೆ ೯೧ ರೈತರಿಂದ ೨ ಸಾವಿರದ ೭೧೨ ಕ್ವಿಂಟಲ್ ಮೆಕ್ಕೆಜೋಳವನ್ನು ೨ ಸಾವಿರದ ೪೦೦ ರೂಪಾಯಿ ದರದಂತೆ ಖರೀದಿಸಿ ಸರಬರಾಜು ಮಾಡಲಾಗಿದೆ. ಕೆ.ಎಂ.ಎಫ್ ೯೧೭ ರೈತರಿಂದ ೨೧ ಸಾವಿರದ ೭೦೬ ಕ್ವಿಂಟಲ್ ಮೆಕ್ಕೆಜೋಳ ಖರೀದಿಸಿದೆ ಎಂದು ಹೇಳಿದ್ದಾರೆ.

***************

ಮಹಿಳೆಯರ ಪ್ರೀಮಿಯರ್ ಲೀಗ್ ಕ್ರಿಕೆಟ್ ಪಂದ್ಯಾವಳಿಯ ಫೈನಲ್‌ನಲ್ಲಿಂದು ಡೆಲ್ಲಿ ಕ್ಯಾಪಿಟಲ್ಸ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಗಳು ಮುಖಾಮುಖಿಯಾಗಲಿವೆ. ವಡೋದರದ ಬಿಸಿಎ ಕ್ರೀಡಾಂಗಣದಲ್ಲಿ ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ೨ನೇ ಬಾರಿ ಫೈನಲ್‌ಗೇರಿದ್ದು, ಡಬ್ಲ್ಯೂಪಿಎಲ್ ಪ್ರಶಸ್ತಿ ಗೆಲ್ಲುವ ಸಾಧ್ಯತೆಗಳಿವೆ. ಅದೇ ರೀತಿ ೪ನೇ ಬಾರಿ ಫೈನಲ್‌ಗೇರಿರುವ ಡೆಲ್ಲಿ ಕ್ಯಾಪಿಟಲ್ಸ್ ಕೂಡ ಪ್ರಶಸ್ತಿ ಗೆಲ್ಲುವ ಮೆಚ್ಚಿನ ತಂಡಗಳಲ್ಲಿ ಒಂದಾಗಿದೆ.

**************